# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1766 (1957) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 24-03-2026 |

*****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | 2019-20 ನೇ ಸಾಲಿನ 4ನೇ ರಾಷ್ಟ್ರೀಯ ಕೈಮಗ್ಗ ಗಣತಿ ಪ್ರಕಾರ ರಾಜ್ಯದಲ್ಲಿ ಪ್ರಸ್ತುತ ಒಟ್ಟು 21819 ಕೈಮಗ್ಗಗಳು ಹಾಗೂ 2021-22ನೇ ಸಾಲಿನಲ್ಲಿ Academy of Management studies, New delhi (AMS) ಸಂಸ್ಥೆಯಿಂದ ಕೈಗೊಂಡಿರುವ ವಿದ್ಯುತ್ ಮಗ್ಗ ನೇಕಾರರ ಗಣತಿ ಪ್ರಕಾರ ರಾಜ್ಯದಲ್ಲಿ ಒಟ್ಟು 96658 ವಿದ್ಯುತ್ ಮಗ್ಗಗಳು ಇರುತ್ತವೆ.<br><br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| (ಆ) | ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳಿಗೆ ಸರ್ಕಾರದಿಂದ ಯಾವ ಸೌಲಭ್ಯಗಳನ್ನು ನೀಡಲಾಗಿದೆ: (ಕಾರ್ಮಿಕರಿಗೆ ಮತ್ತು ಮಾಲೀಕರಿಗೆ) | ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳ ಕಾರ್ಮಿಕರಿಗೆ ಹಾಗೂ ಮಾಲೀಕರುಗಳಿಗೆ ಸರ್ಕಾರದಿಂದ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>**ಕೈಮಗ್ಗ ವಲಯ ಯೋಜನೆಗಳು:-**<br><br>• ನೇಕಾರರ ಸಮ್ಮಾನ್ ಯೋಜನೆಯಡಿ ಕೈಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡಲಾಗುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೂನ್ಯ ಹಾಗೂ ಶೇ.1ರ ಬಡ್ಡಿ ದರದಲ್ಲಿ ರೂ.2.00 ಲಕ್ಷಗಳವರೆಗೆ, ಶೇ.3 ರ ಬಡ್ಡಿ ದರದಲ್ಲಿ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳವರೆಗೆ ಸಾಲ ನೀಡಲಾಗುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್ / ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೇ.8 ರಷ್ಟು ಬಡ್ಡಿ ಸಹಾಯಧನ |

ನೀಡಲಾಗುವುದು.

- ಕೈಮಗ್ಗ ನೇಕಾರರ ಸಹಕಾರ ಸಂಘಗಳು ತಮ್ಮ ಕೈಮಗ್ಗ ಉತ್ಪನ್ನಗಳ ಮಾರಾಟ ಮೇಲೆ ರಾಜ್ಯ ಸರ್ಕಾರದಿಂದ ಶೇ.20ರಷ್ಟು ರಿಬೇಟ್ ಅನ್ನು ಮರು ಸಂದಾಯ ಪಾವತಿಸಲಾಗುವುದು.
- ಕಚ್ಚಾಮಾಲು ಖರೀದಿ ಮೇಲೆ ಕೈಮಗ್ಗ ಸಹಕಾರ ಸಂಘಗಳಿಗೆ ಪ್ರತಿ ಕೆ.ಜಿ ಗೆ ರೂ.15/- ರ ಸಹಾಯಧನ ನೀಡಲಾಗುವುದು.
- ಮಿತವ್ಯಯ ನಿಧಿ ಯೋಜನೆಯಡಿ ನೇಕಾರರ ಮಜೂರಿಯಿಂದ ಶೇ.8 ನ್ನು ಕಟಾಯಿಸಿ ರಾಜ್ಯ ಸರ್ಕಾರದ ಶೇ.8 ರ ಸಮಚಂದಾ ಸೇರಿಸಿ ಖಜಾನೆಯಲ್ಲಿ ಜಮಾ ಮಾಡಲಾಗುವುದು ಜಮೆಯಾದ ಮೊತ್ತಕ್ಕೆ ಶೇ.12 ರ ಬಡ್ಡಿಯನ್ನು ನೀಡಲಾಗುವುದು.
- ರಾಜ್ಯದ ಕೈಮಗ್ಗ ನೇಕಾರರ ಕೈಮಗ್ಗ ಉತ್ಪನ್ನಗಳನ್ನು ಪ್ರೋತ್ಸಾಹಿಸಲು ಹಾಗೂ ಬೆಂಬಲ ನೀಡಲು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕ್ಷೇತ್ರ / ವಲಯದಲ್ಲಿ ಕೈಮಗ್ಗ ನೇಕಾರರು ಹೊಂದಿರುವ ನೈಪುಣ್ಯತೆ / ಶ್ರೇಷ್ಠತೆ / ತಾಂತ್ರಿಕತೆ / ಉತ್ಕೃಷ್ಟತೆಗಾಗಿ ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಲಾಗುವುದು.
- ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಾಮಾನ್ಯ ವರ್ಗದ ಫಲಾನುಭವಿಗಳಿಂದ ಸ್ಥಾಪಿಸಲಾಗುವ ಅತಿ ಸಣ್ಣ (ಎಂ.ಇ) ಘಟಕಗಳಿಗೆ ಗರಿಷ್ಠ ಶೇಕಡ 50 ರಷ್ಟು ಅಥವಾ ರೂ.50.00 ಲಕ್ಷಗಳ ಸರ್ಕಾರದ ಸಹಾಯಧನ ನೀಡಲಾಗುವುದು.
- ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ಕಾರ್ಯಕ್ರಮ (NHDP) ದಡಿ ಕೈಮಗ್ಗ ನೇಕಾರರಿಗೆ ಮುದ್ರಾ ಯೋಜನೆಯಡಿ ಸಾಲ ಸೌಲಭ್ಯ ನೀಡಲಾಗುವುದು.
- ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಡಿ ನೋಂದಾಯಿತ ನೇಕಾರರಿಗೆ ಕಚ್ಚಾ ನೂಲನ್ನು ಒದಗಿಸಿ ಅವರು ಉತ್ಪಾದಿಸಿದ ಬಟ್ಟೆಗಳನ್ನು ಸ್ವೀಕರಿಸಿ ಪರಿವರ್ತನಾ ಶುಲ್ಕವನ್ನು ಒದಗಿಸಲಾಗುವುದು.

**ವಿದ್ಯುತ್‌ಮಗ್ಗ ವಲಯ ಯೋಜನೆಗಳು:-**

- ನೇಕಾರರ ಸಮ್ಮಾನ್ ಯೋಜನೆಯಡಿ ವಿದ್ಯುತ್‌ಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡುವುದು.

| | | |
|---|---|---|
| | | • ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ<br>• 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ.<br>• ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ.<br>• ವಿದ್ಯುತ್ ರಿಯಾಯಿತಿ ಸಹಾಯಧನ – 01 ರಿಂದ 10 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಉಚಿತವಾಗಿ ವಿದ್ಯುತ್ ಪೂರೈಸಿ ಶೂನ್ಯ ಬಿಲ್ ನೀಡಲಾಗುತ್ತಿದೆ ಹಾಗೂ 10.01 ರಿಂದ 20 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಬಳಸಿದ ಒಟ್ಟು ಯೂನಿಟ್ ಗಳಿಗೆ ಪ್ರತಿ ಯೂನಿಟ್‌ಗೆ ರೂ.1.25 ರಂತೆ ವಿದ್ಯುತ್ ಶುಲ್ಕವನ್ನು (Energy Charges) ಘಟಕದವರು ಪಾವತಿಸುವುದು. ಬಾಕಿ ಉಳಿಯುವ ವಿದ್ಯುತ್ ಶುಲ್ಕದ ಮೊತ್ತವನ್ನು ಮಾತ್ರ ಸರ್ಕಾರದ ಬೊಕ್ಕಸದಿಂದ ಭರಿಸಲಾಗುತ್ತಿದೆ.<br>• 20 ಹೆಚ್.ಪಿ ಇಂದ 200 ಹೆಚ್.ಪಿ ವರೆಗಿನ ವಿದ್ಯುತ್ ಸಂಪರ್ಕ ಹೊಂದಿರುವ SCSP / TSP ವಿದ್ಯುತ್ ಮಗ್ಗ ಘಟಕಗಳಿಗೆ Energy Charges ನಲ್ಲಿ ಶೇ.50 ರಷ್ಟು ವಿದ್ಯುತ್ ಸಹಾಯಧನ ಒದಗಿಸಲಾಗುವುದು.<br>• ಸೈಜಿಂಗ್ ಘಟಕ ಸ್ಥಾಪನೆಗೆ ಸಹಾಯಧನ<br>• ಮಿನಿ ಪವರ್‌ಲೂಮ್ ಪಾರ್ಕ್ ಸ್ಥಾಪನೆಗೆ ಸಹಾಯಧನ<br>• ಪ್ರೊಸೆಸ್ಸಿಂಗ್ ಘಟಕ ಸ್ಥಾಪನೆಗೆ ಸಹಾಯಧನ<br>• ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಂ.ಇ) ಘಟಕಗಳ ಸ್ಥಾಪನೆಗೆ ಸಹಾಯಧನ.<br><br>**ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019-24:-**<br><br>ರಾಜ್ಯದಲ್ಲಿ ಜವಳಿ ಕೈಗಾರಿಕೆಗಳಿಗೆ ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ 2019-24 ರಡಿ ಲಭ್ಯವಿರುವ ಈ ಕೆಳಕಂಡ ಪ್ರೋತ್ಸಾಹನವನ್ನು ನೀಡಲಾಗುತ್ತಿದೆ.<br><br>• ಸಾಲಾಧಾರಿತ ಬಂಡವಾಳ ಸಹಾಯಧನ (10% ರಿಂದ 30% ಸಹಾಯಧನ ಒಟ್ಟು ಬಂಡವಾಳ ಹೂಡಿಕೆಯ ಮೇಲೆ)<br>• ಬಡ್ಡಿ ಸಹಾಯಧನ (ಮಧ್ಯಮ ಹಾಗೂ ಬೃಹತ್) ಜವಳಿ /ಸಿದ್ಧ ಉಡುಪು ಘಟಕಗಳಿಗೆ ಮೊದಲ 05 ವರ್ಷಗಳಿಗೆ ಅವಧಿ ಸಾಲಗಳ ಮೇಲೆ ವಾರ್ಷಿಕ |

| | | |
|---|---|---|
| | | ಶೇ.5 ರಷ್ಟು ಬಡ್ಡಿ ಸಹಾಯಧನ) ವಿದ್ಯುತ್‌ಚ್ಛಕ್ತಿ ಮರುಪಾವತಿ ಸಹಾಯಧನ (ಅತಿ ಸಣ್ಣ ಮತ್ತು ಸಣ್ಣ ಘಟಕಗಳಿಗೆ ಪ್ರತಿ ಯುನಿಟ್‌ಗೆ ರೂ.1/- ರಿಂದ 2/- ರಂತೆ ವಿದ್ಯುತ್ ವೆಚ್ಚದ ಮರುಪಾವತಿ)<br>• ಇ.ಎಸ್.ಐ & ಇ.ಪಿ.ಎಫ್ ಮರುಪಾವತಿ ಸಹಾಯಧನ (ಶೇ.75 ರಷ್ಟು ಮಾಲೀಕರ ವಂತಿಕೆ ಮರುಪಾವತಿ)<br>• ವೇತನ ಸಹಾಯಧನ (ಸಿದ್ಧ ಉಡುಪು ಘಟಕಗಳಿಗೆ ಪ್ರತಿ ಕಾರ್ಮಿಕರಿಗೆ ರೂ2,000/- ರಿಂದ ರೂ.3,000/- ವೇತನ ಸಹಾಯಧನ<br>• ಶೇ.100 ರಷ್ಟು ಮುದ್ರಾಂಕ ಶುಲ್ಕ ವಿನಾಯಿತಿ & ಪ್ರತಿ ರೂ.1,000/-ಕ್ಕೆ ರೂ.1/-ರ ದರದಲ್ಲಿ ನೋಂದಣಿ ಶುಲ್ಕ ರಿಯಾಯಿತಿ.<br>• ತ್ಯಾಜ್ಯ ವಿಲೇವಾರಿ ಘಟಕಕ್ಕೆ ಶೇ.50 ರಷ್ಟು ಸಹಾಯಧನ ಅಥವಾ ಗರಿಷ್ಠ ರೂ.5.00 ಕೋಟಿ ಇವುಗಳಲ್ಲಿ ಯಾವುದು ಕಡಿಮೆಯೋ ಅದು. |
| ಇ) | ಮಗ್ಗದವರಿಂದ ಸರ್ಕಾರ ನೇರವಾಗಿ ಸೀರೆಯನ್ನು ಖರೀದಿಸುವ ಬಗ್ಗೆ ಚಿಂತಿಸಿದೆಯೇ: ಚಿಂತಿಸಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಕ್ರಮಕೈಗೊಳ್ಳಲಾಗುವುದು: | ಈ ರೀತಿಯ ಯಾವುದೇ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇರುವುದಿಲ್ಲ. |
| ಈ) | ನೇಕಾರರ ತೊಂದರೆಗಳನ್ನು ದೂರ ಮಾಡಲು ಸರ್ಕಾರ ಯಾವ ಯೋಜನೆಯನ್ನು ಹಮ್ಮಿಕೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು) | ನೇಕಾರರ ತೊಂದರೆಗಳನ್ನು ದೂರ ಮಾಡಲು, ನೇಕಾರರನ್ನು ಪ್ರೋತ್ಸಾಹಿಸಲು ಇಲಾಖೆಯಿಂದ ಈ ಕೆಳಕಂಡ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>**ಕೈಮಗ್ಗ ವಲಯ ಯೋಜನೆಗಳು:-**<br><br>• ನೇಕಾರರ ಸಮ್ಮಾನ್ ಯೋಜನೆಯಡಿ ಕೈಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡಲಾಗುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೂನ್ಯ ಹಾಗೂ ಶೇ.1ರ ಬಡ್ಡಿ ದರದಲ್ಲಿ ರೂ.2.00 ಲಕ್ಷಗಳವರೆಗೆ, ಶೇ.3 ರ ಬಡ್ಡಿ ದರದಲ್ಲಿ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳವರೆಗೆ ಸಾಲ ನೀಡಲಾಗುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್ / ವಾಣಿಜ್ಯ ಬ್ಯಾಂಕ್‌ಗಳಿಂದ |

| | | |
|---|---|---|
| | | ಪಡೆಯುವ ಸಾಲಕ್ಕೆ ಶೇ.8 ರಷ್ಟು ಬಡ್ಡಿ ಸಹಾಯಧನ ನೀಡಲಾಗುವುದು.<br>• ಕೈಮಗ್ಗ ನೇಕಾರರ ಸಹಕಾರ ಸಂಘಗಳು ತಮ್ಮ ಕೈಮಗ್ಗ ಉತ್ಪನ್ನಗಳ ಮಾರಾಟ ಮೇಲೆ ರಾಜ್ಯ ಸರ್ಕಾರದಿಂದ ಶೇ.20ರಷ್ಟು ರಿಬೇಟ್ ಅನ್ನು ಮರು ಸಂದಾಯ ಪಾವತಿಸಲಾಗುವುದು.<br>• ಕಚ್ಚಾಮಾಲು ಖರೀದಿ ಮೇಲೆ ಕೈಮಗ್ಗ ಸಹಕಾರ ಸಂಘಗಳಿಗೆ ಪ್ರತಿ ಕೆ.ಜಿ ಗೆ ರೂ.15/– ರ ಸಹಾಯಧನ ನೀಡಲಾಗುವುದು.<br>• ಮಿತವ್ಯಯ ನಿಧಿ ಯೋಜನೆಯಡಿ ನೇಕಾರರ ಮಜೂರಿಯಿಂದ ಶೇ.8 ನ್ನು ಕಟಾಯಿಸಿ ರಾಜ್ಯ ಸರ್ಕಾರದ ಶೇ.8 ರ ಸಮಚಂದಾ ಸೇರಿಸಿ ಖಜಾನೆಯಲ್ಲಿ ಜಮಾ ಮಾಡಲಾಗುವುದು ಜಮೆಯಾದ ಮೊತ್ತಕ್ಕೆ ಶೇ.12 ರ ಬಡ್ಡಿಯನ್ನು ನೀಡಲಾಗುವುದು.<br>• ರಾಜ್ಯದ ಕೈಮಗ್ಗ ನೇಕಾರರ ಕೈಮಗ್ಗ ಉತ್ಪನ್ನಗಳನ್ನು ಪ್ರೋತ್ಸಾಹಿಸಲು ಹಾಗೂ ಬೆಂಬಲ ನೀಡಲು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕ್ಷೇತ್ರ / ವಲಯದಲ್ಲಿ ಕೈಮಗ್ಗ ನೇಕಾರರು ಹೊಂದಿರುವ ನೈಪುಣ್ಯತೆ / ಶ್ರೇಷ್ಠತೆ / ತಾಂತ್ರಿಕತೆ / ಉತ್ಕೃಷ್ಟತೆಗಾಗಿ ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಲಾಗುವುದು.<br>• ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಾಮಾನ್ಯ ವರ್ಗದ ಫಲಾನುಭವಿಗಳಿಂದ ಸ್ಥಾಪಿಸಲಾಗುವ ಅತಿ ಸಣ್ಣ (ಎಂ.ಇ) ಘಟಕಗಳಿಗೆ ಗರಿಷ್ಠ ಶೇಕಡ 50 ರಷ್ಟು ಅಥವಾ ರೂ.50.00 ಲಕ್ಷಗಳ ಸರ್ಕಾರದ ಸಹಾಯಧನ ನೀಡಲಾಗುವುದು.<br>• ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ಕಾರ್ಯಕ್ರಮ (NHDP) ದಡಿ ಕೈಮಗ್ಗ ನೇಕಾರರಿಗೆ ಮುದ್ರಾ ಯೋಜನೆಯಡಿ ಸಾಲ ಸೌಲಭ್ಯ ನೀಡಲಾಗುವುದು.<br>• ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಡಿ ನೋಂದಾಯಿತ ನೇಕಾರರಿಗೆ ಕಚ್ಚಾ ನೂಲನ್ನು ಒದಗಿಸಿ ಅವರು ಉತ್ಪಾಸಿದ ಬಟ್ಟೆಗಳನ್ನು ಸ್ವೀಕರಿಸಿ ಪರಿವರ್ತನಾ ಶುಲ್ಕವನ್ನು ಒದಗಿಸಲಾಗುವುದು.<br><br>**ವಿದ್ಯುತ್‌ಮಗ್ಗ ವಲಯ ಯೋಜನೆಗಳು:–**<br><br>• ನೇಕಾರರ ಸಮ್ಮಾನ್ ಯೋಜನೆಯಡಿ ವಿದ್ಯುತ್‌ಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/– ಗಳ ಆರ್ಥಿಕ |

| | | |
|---|---|---|
| | | ನೆರವು ನೀಡುವುದು.<br>• ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ<br>• 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ.<br>• ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ.<br>• ವಿದ್ಯುತ್ ರಿಯಾಯಿತಿ ಸಹಾಯಧನ – 01 ರಿಂದ 10 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಉಚಿತವಾಗಿ ವಿದ್ಯುತ್ ಪೂರೈಸಿ ಶೂನ್ಯ ಬಿಲ್ ನೀಡಲಾಗುತ್ತಿದೆ ಹಾಗೂ 10.01 ರಿಂದ 20 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಬಳಸಿದ ಒಟ್ಟು ಯೂನಿಟ್ ಗಳಿಗೆ ಪ್ರತಿ ಯೂನಿಟ್‌ಗೆ ರೂ.1.25 ರಂತೆ ವಿದ್ಯುತ್ ಶುಲ್ಕವನ್ನು (Energy Charges) ಘಟಕದವರು ಪಾವತಿಸುವುದು. ಬಾಕಿ ಉಳಿಯುವ ವಿದ್ಯುತ್ ಶುಲ್ಕದ ಮೊತ್ತವನ್ನು ಮಾತ್ರ ಸರ್ಕಾರದ ಬೊಕ್ಕಸದಿಂದ ಭರಿಸಲಾಗುತ್ತಿದೆ.<br>• 20 ಹೆಚ್.ಪಿ ಇಂದ 200 ಹೆಚ್.ಪಿ ವರೆಗಿನ ವಿದ್ಯುತ್ ಸಂಪರ್ಕ ಹೊಂದಿರುವ SCSP / TSP ವಿದ್ಯುತ್ ಮಗ್ಗ ಘಟಕಗಳಿಗೆ Energy Charges ನಲ್ಲಿ ಶೇ.50 ರಷ್ಟು ವಿದ್ಯುತ್ ಸಹಾಯಧನ ಒದಗಿಸಲಾಗುವುದು.<br>• ಸೈಜಿಂಗ್ ಘಟಕ ಸ್ಥಾಪನೆಗೆ ಸಹಾಯಧನ<br>• ಮಿನಿ ಪವರ್‌ಲೂಮ್ ಪಾರ್ಕ್ ಸ್ಥಾಪನೆಗೆ ಸಹಾಯಧನ<br>• ಪ್ರೊಸೆಸ್ಸಿಂಗ್ ಘಟಕ ಸ್ಥಾಪನೆಗೆ ಸಹಾಯಧನ<br>• ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಂ.ಇ) ಘಟಕಗಳ ಸ್ಥಾಪನೆಗೆ ಸಹಾಯಧನ. |

ಸಂಖ್ಯೆ: **CI 87 JAKE 2026**

(ಶಿವಾನಂದ ಎಸ್. ಪಾಟೀಲ)

ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

# ಅನುಬಂಧ

| ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳ ಜಿಲ್ಲಾವಾರು ಮಾಹಿತಿ | | | |
|---|---|---|---|
| ಕ್ರ.ಸಂ | ತಾಲ್ಲೂಕು | ಕೈಮಗ್ಗಗಳ ಸಂಖ್ಯೆ | ವಿದ್ಯುತ್‌ಮಗ್ಗಗಳ ಸಂಖ್ಯೆ |
| 1 | ಬೆಂಗಳೂರು ನಗರ | 575 | 22005 |
| 2 | ಬೆಂಗಳೂರು ಗ್ರಾಮಾಂತರ | 76 | 18705 |
| 3 | ಬಾಗಲಕೋಟೆ | 6514 | 15808 |
| 4 | ಬೆಳಗಾವಿ | 1751 | 24574 |
| 5 | ಚಿಕ್ಕಮಗಳೂರು | 70 | 0 |
| 6 | ಚಾಮರಾಜನಗರ | 670 | 80 |
| 7 | ಚಿಕ್ಕಬಳ್ಳಾಪುರ | 712 | 1089 |
| 8 | ಚಿತ್ರದುರ್ಗ | 2055 | 88 |
| 9 | ದಾವಣಗೆರೆ | 235 | 97 |
| 10 | ಗದಗ | 1371 | 3477 |
| 11 | ಹಾಸನ | 96 | 828 |
| 12 | ದಕ್ಷಿಣ ಕನ್ನಡ | 55 | 0 |
| 13 | ಧಾರವಾಡ | 223 | 303 |
| 14 | ಹಾವೇರಿ | 680 | 594 |
| 15 | ಮೈಸೂರು | 68 | 81 |
| 16 | ಮಂಡ್ಯ | 54 | 246 |
| 17 | ಕೋಲಾರ | 145 | 215 |
| 18 | ಕೊಡಗು | 45 | 28 |
| 19 | ಶಿವಮೊಗ್ಗ | 86 | 350 |
| 20 | ತುಮಕೂರು | 4097 | 4800 |
| 21 | ಉಡುಪಿ | 77 | 0 |
| 22 | ವಿಜಯಪುರ | 267 | 17 |
| 23 | ಬಳ್ಳಾರಿ | 353 | 4 |
| 24 | ಕೊಪ್ಪಳ | 194 | 1408 |
| 25 | ಕಲಬುರಗಿ | 463 | 105 |
| 26 | ಬೀದರ್ | 457 | 70 |
| 27 | ರಾಮನಗರ | 68 | 1666 |
| 28 | ರಾಯಚೂರು | 25 | 0 |
| 29 | ಉತ್ತರ ಕನ್ನಡ | 36 | 20 |
| 30 | ಯಾದಗಿರಿ | 301 | 0 |
| ಒಟ್ಟು | | 21819 | 96658 |

ಅಪರ ನಿರ್ದೇಶಕರು (ಕೈಜಿ)
ಕೈಮಗ್ಗ ಮತ್ತು ಜವಳಿ